# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ) ರವರ ಕಛೇರಿ, ಎನ್.ಆರ್.ವೃತ್ತ, ಬೆಂಗಳೂರು –02.

ಸಂಖ್ಯೆ: ಜನಿಕಪ (ದ)/ಪ್ರಾ.ಪ/ಸನಿ/32/2019-20 ದಿನಾಂಕ: 31-10-2019.

## ಭಾಗಶಃ ಪ್ರಾರಂಭಿಕ ಪ್ರಮಾಣ ಪತ್ರ

**ವಿಷಯ:** ಆಸ್ತಿ ಸಂಖ್ಯೆ 33/2(P)/32/1(P), 33/1, ತಲ್ಲಘಟ್ಟಪುರ, ಹೆಮ್ಮಿಗೆಪುರ, ವಾರ್ಡ್ ಸಂಖ್ಯೆ: 198, ಬೆಂಗಳೂರು ಇಲ್ಲಿ ನಿರ್ಮಿಸಲಾಗುತ್ತಿರುವ ಬ್ಲಾಕ್ ಬಿ ರಲ್ಲಿನ ಬಿ1 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ಅರ್ಜಿದಾರರ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿರುವ ಮನವಿ ದಿನಾಂಕ: 09-10-2019.

2) ನಕ್ಷೆ ಮಂಜೂರಾತಿ ಸಂಖ್ಯೆ: BMICAPA/Pra.Pa.Pa/11/15-16 ದಿನಾಂಕ: 21-04-2016.

3) ಅಪರ ನಿರ್ದೇಶಕರು, ಕಟ್ಟಡ ಪರವಾನಗಿ ಕೋಶ ರವರ ಅನುಮೋದನೆ ದಿನಾಂಕ: 25-10-2019.

*****

ಆಸ್ತಿ ಸಂಖ್ಯೆ 33/2(P)/32/1(P), 33/1, ತಲ್ಲಘಟ್ಟಪುರ, ಹೆಮ್ಮಿಗೆಪುರ, ವಾರ್ಡ್ ಸಂಖ್ಯೆ: 198, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಬ್ಲಾಕ್ ಎ ರಲ್ಲಿ ತಳ+ನೆಲ+ಮೇಲಿನ 18 ಅಂತಸ್ತುಗಳ 74 ಘಟಕಗಳು ಮತ್ತು ಬ್ಲಾಕ್ ಬಿ ರಲ್ಲಿ 2ತಳ +ನೆಲ+ಮೇಲಿನ 30 ಅಂತಸ್ತುಗಳ 360 ಘಟಕಗಳು ಒಟ್ಟಾರೆಯಾಗಿ 434 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ನಿರ್ಮಾಣಕ್ಕೆ ಬಿ.ಎಂ.ಐ.ಸಿ.ಎ.ಪಿ.ಎಯಿಂದ ಪರಿಷ್ಕೃತ ನಕ್ಷೆ ಮಂಜೂರಾತಿ ಸಂಖ್ಯೆ: BMICAPA/Pra.Pa.Pa/11/15-16 ದಿನಾಂಕ: 21-04-2016 ರಂದು ನಕ್ಷೆ ಮಂಜೂರಾತಿಯನ್ನು ಹಾಗೂ ಕಾರ್ಯಾದೇಶದ ಪ್ರಾರಂಭಿಕ ಪ್ರಮಾಣ ಪತ್ರವನ್ನು ಪಡೆದಿರುತ್ತಾರೆ.

ತದನಂತರ ಈ ಕಛೇರಿಯಿಂದ ದಿನಾಂಕ: 03-10-2016 ರಂದು ಲೈಸೆನ್ಸ್ ಪಡೆದಿರುತ್ತಾರೆ. ಬ್ಲಾಕ್ ಎ ರಲ್ಲಿ ತಳ+ನೆಲ+ಮೇಲಿನ 18 ಅಂತಸ್ತುಗಳ 74 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಕ್ಕೆ ದಿನಾಂಕ: 17-02-2017 ರಂದು ಸ್ವಾಧೀನಾನುಭವ ಪ್ರಮಾಣ ಪತ್ರ ಹಾಗೂ ಬ್ಲಾಕ್ ಬಿ ರಲ್ಲಿನ ಬಿ2 ಮತ್ತು ಬಿ3 ವಸತಿ ಸಮುಚ್ಚಯ ಕಟ್ಟಡಕ್ಕೆ ದಿನಾಂಕ: 27-12-2018 ರಂದು ಪ್ರಾರಂಭಿಕ ಪ್ರಮಾಣ ಪತ್ರ ನೀಡಲಾಗಿರುತ್ತದೆ. ಉಲ್ಲೇಖ (1) ರ ಮನವಿಗೆ ಸಂಬಂಧಿಸಿದಂತೆ, ಬ್ಲಾಕ್ ಬಿ ರಲ್ಲಿನ ಬಿ1 ರ ವಸತಿ ಸಮುಚ್ಚಯ ಕಟ್ಟಡದ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ದಿನಾಂಕ: 14-10-2019 ರಂದು ಸ್ಥಳ ಪರಿಶೀಲಿಸಲಾಗಿ ಮಂಜೂರಾತಿ ನಕ್ಷೆಯನ್ವಯ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ನಿರ್ಮಿಸಿದ್ದು, ಸದರಿ ಪ್ರಸ್ತಾವನೆಗೆ ಉಲ್ಲೇಖ (3) ರಂತೆ ಅಪರ ನಿರ್ದೇಶಕರು, ಕಟ್ಟಡ ಪರವಾನಗಿ ಕೋಶ ರವರು ಅನುಮೋದನೆ ನೀಡಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 74,000/–ಗಳನ್ನು ಅರ್ಜಿದಾರರಿಂದ ರಸೀದಿ ಸಂಖ್ಯೆ: RE-ifms624-TP/000116 ದಿನಾಂಕ: 31-10-2019 ರಂದು ಸಂದಾಯಿಸಿಕೊಳ್ಳಲಾಗಿದೆ.

31/x/19

ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



31/10/19 31/10/19 31.10.19

Scanned with CamScanner

ಆದುದರಿಂದ ಸದರಿ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬ್ಲಾಕ್ ಬಿ ರಲ್ಲಿನ ಬಿ1 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
4) ನಕ್ಷೆ ಮಂಜೂರಾತಿ ಪಡೆದ ದಿನಾಂಕದಿಂದ ಐದು ವರ್ಷದೊಳಗಾಗಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.
5) ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ರಂತೆ ನಿರ್ವಹಿಸುವುದು.
6) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಒಳಸಿಕೊಳ್ಳುವುದು.
7) ಅರ್ಜಿದಾರರು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.
8) ಅರ್ಜಿದಾರರು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

ಸಹಿ/-
ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ
Smt. Vinod Kumari & Geeta Pundalika
M/s. Total Environmental Building Systems Pvt. Ltd.,
# 78, Imagine, EPIP Zone
ITPL Main Road, White Field
Bangalore – 560 066.

ಪ್ರತಿಯನ್ನು: ಕಾರ್ಯಪಾಲಕ ಅಭಿಯಂತರರು / ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ಉಪವಿಭಾಗ ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

2 copies

31/x/19

ಜಂಟಿ ನಿರ್ದೇಶಕರು, ಕಟ್ಟಡ ಪರವಾನಗಿ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

31/10/19 31/10/19 31.10.19



Scanned with CamScanner